## ಕರ್ನಾಟಕ ಸರ್ಕಾರದ ನಡವಳಿ

**ವಿಷಯ: ಶ್ರೀ ಹೆಚ್.ಎನ್.ಕಲ್ಲೇಶಪ್ಪ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ಅಲಗವಾಡಿ ಗ್ರಾಮ ಪಂಚಾಯತಿ, ಚಿತ್ರದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರ ವಿರುದ್ಧ ಲೋಕಾಯುಕ್ತ ವಿಚಾರಣೆ – ಅಂತಿಮ ಆದೇಶ ಹೊರಡಿಸುವ ಕುರಿತು.**

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/746/ಗ್ರಾಪಂಕಾ/2012, ದಿನಾಂಕ: 16–02–2013.
2. ಅಪರ ನಿಬಂಧಕರು ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: LOK/INQ/14-A/121/2013/ARE-1, ದಿನಾಂಕ:03-03-2017.
3. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: LOK/ INQ/14- A/121/2013/ARE-1, ದಿನಾಂಕ:09-03-2017.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರ ಸಂಖ್ಯೆ:LOK/ INQ/14-A/121/2013/ARE-1, ದಿನಾಂಕ:10-03-2017.
5. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ:ಗ್ರಾಅಪ/230/ಗ್ರಾಪಂಕಾ/2017, ದಿನಾಂಕ:06–04–2017.
6. ಶ್ರೀ ಹೆಚ್.ಎನ್.ಕಲ್ಲೇಶಪ್ಪ ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ:03–05–2017.

**ಪ್ರಸ್ತಾವನೆ :**

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಹೆಚ್.ಎನ್.ಕಲ್ಲೇಶಪ್ಪ, ಕಾರ್ಯದರ್ಶಿ, ಅಲಗವಾಡಿ ಗ್ರಾಮ ಪಂಚಾಯತಿ, ಚಿತ್ರದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14–ಎ ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಯಿತು. ಆದರಂತೆ ಅಪರ ನಿಬಂಧಕರು ವಿಚಾರಣೆಗಳು–1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ":**

> "That DGO Sri H.N.Kalleshappa, Gram Pancahayath Secretary, Alagawadi Gram Panchayath, Chitradurga demanded and accepted a bribe of Rs.5,000/- on 25-04-2011 from complainant Smt. Giddi Mehabood W/o Hussain Peer of Venkateshwara Extension, Challakere Raod, Chitradurga for giving license towards construction of a house, that is for doing an official act and Thereby failed to maintain absolute integrity and devotion to duty and committed an act which is unbecoming of a Government servant and thus guilty of misconduct under Rule 3(1)(i) to (iii) of KCS (Conduct) Rules 1966".

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ(2) ರಲ್ಲಿ ಓದಲಾದ ವರದಿಯಲ್ಲಿ ಶ್ರೀ ಹೆಚ್.ಎನ್.ಕಲ್ಲೇಶಪ್ಪ, ಕಾರ್ಯದರ್ಶಿ, ಅಲಗವಾಡಿ ಗ್ರಾಮ ಪಂಚಾಯತಿ, ಚಿತ್ರದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತರು ಅಂಗೀಕರಿಸಿ ಶ್ರೀ ಹೆಚ್. ಎನ್. ಕಲ್ಲೇಶಪ್ಪ, ಕಾರ್ಯದರ್ಶಿ, ಅಲಗವಾಡಿ ಗ್ರಾಮ ಪಂಚಾಯತಿ, ಚಿತ್ರದುರ್ಗ

ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರ ವಿರುದ್ಧ ಸಾಬೀತಾಗಿರುವ ಆರೋಪಕ್ಕೆ ಅನುಗುಣವಾಗಿ ಸದರಿಯವರಿಗೆ ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8(viii)ರ ಅನ್ವಯ **"ಸೇವೆಯಿಂದ ವಜಾಗೊಳಿಸುವ"** ದಂಡನೆ ವಿಧಿಸಲು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ವರದಿಯಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಈ ಸಂಬಂಧ ಶ್ರೀ ಹೆಚ್.ಎನ್.ಕಲ್ಲೇಶಪ್ಪ, ಕಾರ್ಯದರ್ಶಿ, ಅಲಗವಾಡಿ ಗ್ರಾಮ ಪಂಚಾಯತಿ, ಇವರಿಗೆ ನಿಯಮಾನುಸಾರ ಕ್ರಮಸಂಖ್ಯೆ (5) ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ 2ನೇ ಕಾರಣ ಕೇಳುವ ನೋಟೀಸ್‌ನ್ನು ಜಾರಿಗೊಳಿಸಲಾಗಿತ್ತು. ಈ ನೋಟಿಸಿಗೆ ಅವರು ಮೇಲೆ ಕ್ರಮ ಸಂಖ್ಯೆ (6) ರಲ್ಲಿ ಓದಲಾದ ಮನವಿ ಮೂಲಕ ತಮ್ಮ ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ.

ಆಪಾದಿತ ನೌಕರರು ಸರ್ಕಾರದ 2ನೇ ಕಾರಣ ಕೇಳುವ ನೋಟಿಸಿಗೆ ನೀಡಿರುವ ಲಿಖಿತ ಹೇಳಿಕೆಯಲ್ಲಿ ಈ ಕೆಳಕಂಡ ಪ್ರಮುಖ ಆಕ್ಷೇಪಣೆಗಳನ್ನು ಸಲ್ಲಿಸಿರುತ್ತಾರೆ.

> "ರೂ.5,000/-ಗಳ ಅಕ್ರಮ ಸಂಭಾವನೆಯನ್ನು ಪಡೆದಿರುವ ಸಂಬಂಧ ಮಾನ್ಯ ಉಪಲೋಕಾಯುಕ್ತ ತನಿಖಾಧಿಕಾರಿಗಳು ನಡೆಸಿರುವ ವಿಚಾರಣೆಯಲ್ಲಿನ ಸಾಕ್ಷ್ಯಾಧಾರಗಳಿಂದ ಯಾವುದೇ ಆರೋಪ ಸಾಬೀತಾಗಿರುವುದಿಲ್ಲ. ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುವ ವರದಿಯು ಏಕಪಕ್ಷೀಯವಾಗಿರುತ್ತದೆ. ಆರೋಪಿತ ನೌಕರರು ತಾವು ತಮ್ಮ ಸೇವಾವಧಿಯಲ್ಲಿ ಯಾವುದೇ ಕಳಂಕಕ್ಕೆ ಗುರಿಯಾಗಿರುವುದಿಲ್ಲವೆಂದು ವಿವರಿಸಿರುತ್ತಾರೆ. ಅವರ ಮೇಲಿನ ಆರೋಪವನ್ನು ಸ್ಪಷ್ಟ ಸಾಕ್ಷ್ಯಾಧಾರಗಳ ಹಿನ್ನೆಲೆಯಲ್ಲಿ ಪರಿಶೀಲಿಸಿ ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುವ ದಂಡನೆಯನ್ನು ವಿಧಿಸುವ ಬಗ್ಗೆ ಪುನರ್‌ಪರಿಶೀಲಿಸಬೇಕೆಂದು ಆರೋಪಿತ ನೌಕರರು ವಿನಂತಿಸಿಕೊಂಡಿರುತ್ತಾರೆ".

ವಿಚಾರಣಾಧಿಕಾರಿಯವರು ತಮ್ಮ ವರದಿಯಲ್ಲಿ ಆಪಾದಿತರ ವಿರುದ್ಧದ ಆರೋಪಗಳನ್ನು ಸಾಬೀತು ಪಡಿಸಲು ಪ್ರಮುಖವಾಗಿ ವರದಿಯಲ್ಲಿ ಮೇಲ್ಕಂಡ ಅಂಶಗಳನ್ನು ಅಲ್ಲಗಳೆಯಲು ಸಮರ್ಥವಾದ ಕಾರಣಗಳನ್ನು ನೀಡಿರುತ್ತಾರೆ. ಅವುಗಳ ಸಂಕ್ಷಿಪ್ತ ಸಾರಾಂಶ ಈ ಕೆಳಗಿನಂತಿದೆ.

"During the enquiry the presenting officer has examined three witnesses and has got marked 12 documents among the witnesses exmined by the disciplinary authority.

The Complainant has revealed that the secretary madakeripura Gram Panchayath has demanded Rs.6,000/- to issue lecense for the Construction of building in her site. She complained to the police station about this demand of money. The police has arranged a procedure to trap the DGO while he was accepting the bribe amount Rs.5,000/-.

The DGO has accepted that the said amount and kept in his shirt pocket. Soon after this the police officers has nabbed him and then his hands washed in solution and color of the solution turned to pink.

Sri Manohar the PW-2 who has gone along with the police officer during the operation of this incident has said that the hands of the DGO were washed In Sodium Carbonet Solution on the color of the solution turned pink.

Sri Mrutyunjaya PW-3 who is the Police Inspector the Karnataka Lokayukta has stated that he has received Complainant about the demanding of bribe by the DGO On 25.04.2011. After receiving the complainant he has planned to trap the DGO inpresence of Complainant and Sri Manohar PW-2. The DGO caught red handed and next process of action has been conducted. The DGO gave written Explanation and the same was examined and conducted the further Investigation.

Evidence and material record of this case fully support for the decission of the discipline the authority. The evidence and the documents produced by the investigating officer clearly established that the DGO had received the amount from the Complainant as bribed For issue of license to construct the house.

After examining all the evidence it is. Finally proved that the DGO, while working as Secretary, Alagawadi Gram Panchayath, Chitradurga Taluk had demanded the complainant to pay bribe of Rs.5,000/- in order to issue license for construction of a house and then received the bribed amount of Rs.5,000/- at the time of trap. Therefore, the DGO has failed to maintain absolute integrity and devotion to duty and he has committed grave official misconduct, as defined under Rule 3(i) to (iii) of the KCS (Conduct) Rules 1957. Hence, I have answered the point formulated above in the Affirmetive".

ಸರ್ಕಾರವು ಆಪಾದಿತರು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಲಿಖಿತ ಹೇಳಿಕೆ ಮತ್ತು ವಿಚಾರಣಾ ನಡವಳಿ, ದಾಖಲೆಗಳು ಮತ್ತು ಸಾಕ್ಷ್ಯಾಧಾರಗಳನ್ನು ವಿವರವಾಗಿ ಪರಿಶೀಲಿಸಿದೆ. ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ. ಮಾನ್ಯ ಉಪಲೋಕಾಯುಕ್ತರು ವಿಚಾರಣಾ ವರದಿಯನ್ನು ಅಂಗೀಕರಿಸಿ ಆರೋಪದ ತೀವ್ರತೆಗೆ ಅನುಗುಣವಾಗಿ ಶ್ರೀ ಹೆಚ್.ಎನ್.ಕಲ್ಲೇಶಪ್ಪ, ಕಾರ್ಯದರ್ಶಿ, ಅಲಗವಾಡಿ ಗ್ರಾಮ ಪಂಚಾಯತಿ, ಚಿತ್ರದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ರವರಿಗೆ **"ಸೇವೆಯಿಂದ ವಜಾಗೊಳಿಸುವ"** ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ. ವಿಚಾರಣಾಧಿಕಾರಿಯವರು ಆಪಾದನೆಯನ್ನು ಸಾಬೀತುಪಡಿಸಲು ತಮ್ಮ ವರದಿಯಲ್ಲಿ ವಿವರವಾದ ಕಾರಣಗಳನ್ನು ನೀಡಿರುತ್ತಾರೆ. ಸದರಿ ಕಾರಣಗಳು ಸಮರ್ಥನೀಯವಾಗಿರುತ್ತವೆ. ಆದುದರಿಂದ ಶ್ರೀ ಹೆಚ್.ಎನ್.ಕಲ್ಲೇಶಪ್ಪ ಇವರು 2ನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಹೇಳಿಕೆ ಸಮರ್ಥನೀಯವಲ್ಲವೆಂದು ಕಂಡುಬಂದಿರುತ್ತದೆ. ಆದುದರಿಂದ ಸರ್ಕಾರವು ವಿಚಾರಣಾ ವರದಿ ಹಾಗೂ ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸನ್ನು ಪರಿಶೀಲಿಸಿ ಶ್ರೀ ಹೆಚ್.ಎನ್.ಕಲ್ಲೇಶಪ್ಪ, ಕಾರ್ಯದರ್ಶಿ, ಅಲಗವಾಡಿ ಗ್ರಾಮ ಪಂಚಾಯತಿ, ಚಿತ್ರದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8(viii)ರ ಅನ್ವಯ **"ಸೇವೆಯಿಂದ ವಜಾಗೊಳಿಸುವ"** ದಂಡನೆ ವಿಧಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/230/ಗ್ರಾಪಂಕಾ/2017, ಬೆಂಗಳೂರು, ದಿನಾಂಕ: 04-09-2017.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ ಹೆಚ್.ಎನ್.ಕಲ್ಲೇಶಪ್ಪ, ಕಾರ್ಯದರ್ಶಿ, ಅಲಗವಾಡಿ ಗ್ರಾಮ ಪಂಚಾಯತಿ, ಚಿತ್ರದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 8(viii)ರ ಅನ್ವಯ **"ಸೇವೆಯಿಂದ ವಜಾಗೊಳಿಸುವ"** ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

3. ಅಪರ ನಿಬಂಧಕರು, ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿತ್ರದುರ್ಗ ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಚಿತ್ರದುರ್ಗ, ಚಿತ್ರದುರ್ಗ ಜಿಲ್ಲೆ.
7. ಶ್ರೀ ಹೆಚ್.ಎನ್.ಕಲ್ಲೇಶಪ್ಪ, ಕಾರ್ಯದರ್ಶಿ, ಅಲಗವಾಡಿ ಗ್ರಾಮ ಪಂಚಾಯತಿ, ಚಿತ್ರದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ.
8. ಗಣಕ ಕೋಶ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.